# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 29.10.2021 ರಂದು ಮಧ್ಯಾಹ್ನ 3.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶ್ರೀ ಡಾ.ಅಂಬರೀಶ್ | ಕೋವಿಡ್ ಮೆಡಿಕಲ್ ಆಫೀಸರ್ |
| 4 | ಶ್ರೀ ವೆಂಕಟರಾಜು | ಸದಸ್ಯರು |
| 5 | ಶ್ರೀ ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 6 | ಶ್ರೀ ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 7 | ಶ್ರೀ ಮಹೇಶ್ ಜೆ ಸಿ | ಘನತ್ಯಾಜ್ಯ ಇಲಾಖೆ |
| 8 | ಶ್ರೀಮತಿ ಅನುಪಮ | ಕಂದಾಯ ವಸೂಲಿಗಾರರು |
| 9 | ಶ್ರೀ ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು–ವಾರ್ಡ್ 71 |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

<u>ವಿಷಯ ಸಂಖ್ಯೆ: 1:–</u> ರಸ್ತೆಗುಂಡಿಗಳ ಬಗ್ಗೆ

ಇತ್ತೀಚೆಗೆ ಭಾರೀ ಮಳೆಯಿಂದಾಗೀ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಈಗಾಗಲೇ ಕೆ.ಟಿ.ಜಿ ರಸ್ತೆಯಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚಲಾಗಿರುತ್ತದೆ. ವಾರ್ಡ್‌ನ

ಉಳಿದ ರಸ್ತೆಗಳ ಹಲವು ಕಡೆಗಳಲ್ಲಿ ವೆಟ್‌ಮಿಕ್ಸ್ ಅನ್ನು ಅಳವಡಿಸಲಾಗಿರುತ್ತದೆ. ಮಳೆಯು ಬಿಡುವು ಕೊಟ್ಟ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- <u>ವಿಷಯ ಸಂಖ್ಯೆ:2</u>
  **ಹವಾಮಾನ ಇಲಾಖೆಯಿಂದ ಇನ್ನೂ ಮುಂದಿನ ವಾರದವರೆಗೂ ಇರುವ ಮಳೆಯ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳು:**

ನೋಡಲ್ ಅಧಿಕಾರಿಗಳು ಮಾತನಾಡಿ, ಹವಾಮಾನ ಇಲಾಖೆಯಿಂದ ಮುಂದಿನ ವಾರದವರೆಗೂ ಇರುವ ಮಳೆಯು ಸುರಿಯುವ ಮಾಹಿತಿ ಇರುವುದರಿಂದ ಈ ಬಗ್ಗೆ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಚರ್ಚಿಸಲಾಯಿತು.

ಈ ಬಗ್ಗೆ, ವಾರ್ಡ್ 71ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಹೆಗ್ಗನಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ತಾತ್ಕಾಲಿಕ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದ್ದು, ಅಗತ್ಯ ಸಲಕರಣೆಗಳೊಂದಿಗೆ ಮಳೆಯಿಂದಾಗಿ ಉಂಟಾಗುವ ಸಮಸ್ಯೆಗಳನ್ನು ಪರಿಹರಿಸಲು ದಿನವೂ ಇಬ್ಬರೂ ನೀರು ಸರಬರಾಜು ಸಹಾಯಕರನ್ನು ನಿಯೋಜಿಸಲಾಗಿರುವುದಾಗೀ ಸಭೆಯಲ್ಲಿ ತಿಳಿಸಿದರು.

ಮುಂದುವರೆದು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ದಿನವೂ ಆದ್ಯತೆಯ ಮೇರೆಗೆ ಚರಂಡಿಗಳಲ್ಲಿನ ಹೂಳು ತೆಗೆಯಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು.

- <u>ವಿಷಯ ಸಂಖ್ಯೆ:3</u>
  **ಕೋವಿಡ್–19 ಸಾಂಕ್ರಾಮಿಕದ ಬಗ್ಗೆ:–**

ಸಭೆಯಲ್ಲಿ ಹಾಜರಿದ್ದ ಡಾ.ಅಂಬರೀಶ್ ರವರು ಮಾತನಾಡಿ ವಾರ್ಡ್ ನಂ.71ರ ವ್ಯಾಪ್ತಿಯಲ್ಲಿ ದಿನವೂ 150–200 ಸ್ವ್ಯಾಬ್ ಟೆಸ್ಟ್‌ಗಳನ್ನು ನಡೆಸಲಾಗುತ್ತಿದೆ ಹಾಗೂ ಇತ್ತೀಚೆಗೆ ಯಾವುದೇ ಕೋವಿಡ್–19 ಕೇಸ್‌ಗಳು ದಾಖಲಾಗಿರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ